**2 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರವರ ನ್ಯಾಯಾಲಯ ಮತ್ತು ಜೆ ಎಂ ಎಫ್ ಸಿ, ಹರಿಹರ**

**ಸಿ.ಸಿ. 1039/2023**

**ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಭೋಧಿಸಲಾಯಿತು.** **ಪಿಡಬ್ಲ್ಯೂ.03**

**ದಿನಾಂಕಃ 24.01.2026** **ಸಿಡಬ್ಲ್ಯೂ.02**

| | |
|---|---|
| ಹೆಸರು | ರಾಜಾನಾಯ್ಕ |
| ತಂದೆ ಹೆಸರು | ಲಚ್ಯಾನಾಯ್ಕ |
| ವಯಸ್ಸು | 56 ವರ್ಷ |
| ಉದ್ಯೋಗ | ವ್ಯವಸಾಯ |
| ವಾಸ ಸ್ಥಳ | ಕುಮಾರನಹಳ್ಳಿ |

**ಮುಖ್ಯ ವಿಚಾರಣೆಃ** ಸಹಾಯಕ ಸರ್ಕಾರಿ ಅಭಿಯೋಜಕರಿಂದಃ

ಚಾಸಾ.1 ಹಾಗೂ 3 ರಿಂದ 6 ರವರ ಪರಿಚಯವಿದೆ. ಆರೋಪಿತರ ಪರಿಚಯವಿದೆ. ಸಾಕ್ಷಿಗೆ ಒಂದು ದಾಖಲೆಯನ್ನು ತೋರಿಸಲಾಗಿ ಅದರಲ್ಲಿ ತನ್ನ ಸಹಿ ಇರುವುದನ್ನು ಗುರುತಿಸಿದ್ದು ಅದು ಸ್ಥಳ ಪಂಚನಾಮೆ ಆಗಿದ್ದು ಅದನ್ನು ಈಗಾಗಲೇ ನಿಪಿ.2 ಎಂದು ಗುರುತಿಸಿದ್ದು ಸಾಕ್ಷಿಯ ಸಹಿಯನ್ನು ನಿಪಿ.2 (ಬಿ) ಎಂದು ಗುರುತಿಸಲಾಯಿತು. ಸಾಕ್ಷಿಗೆ ಇನ್ನೊಂದು ದಾಖಲೆಯನ್ನು ತೋರಿಸಲಾಗಿ ಅದರಲ್ಲಿ ತನ್ನ ಸಹಿ ಇರುವುದನ್ನು ಗುರುತಿಸಿದ್ದು ಕಚ್ಚಾ ನಕಾಶೆ ಆಗಿದ್ದು ಅದನ್ನು ಈಗಾಗಲೇ ನಿಪಿ.3 ಎಂದು ಗುರುತಿಸಿದ್ದು ಸಾಕ್ಷಿಯ ಸಹಿಯನ್ನು ನಿಪಿ.3 (ಎ) ಎಂದು ಗುರುತಿಸಲಾಯಿತು. ಸದರಿ ಸಹಿಗಳನ್ನು 3 ವರ್ಷಗಳ ಹಿಂದೆ ಚಾಸಾ.1 ರವರ ಮನೆ ಹತ್ತಿರ ಗಲಾಟೆ ವಿಚಾರವಾಗಿ ಸಹಿ ಮಾಡಿರುತ್ತೇನೆ. ಸದರಿ ಗಲಾಟೆ ಚಾಸಾ.1,4 ಮತ್ತು ಆರೋಪಿತರ ನಡುವೆ ಆಗಿರುತ್ತದೆ. ಈ ವಿಚಾರವಾಗಿ ಪೊಲೀಸರು ಪಂಚನಾಮೆ ಮಾಡಲು ಬಂದಿದ್ದರು. ಪೊಲೀಸರು ಸ್ಥಳಕ್ಕೆ ಮಧ್ಯಾಹ್ನ 2.45 ರಿಂದ 3.00 ಗಂಟೆವರೆಗೆ ಮಾಡಿರುತ್ತಾರೆ. ಸ್ಥಳದಲ್ಲಿ ಪೊಲೀಸರು ಪಂಚನಾಮೆ ಜರುಗಿಸಿ ಕಚ್ಚಾ ನಕಾಶೆ ತಯಾರಿಸಿ ಪೋಟೋ ತೆಗೆದಿರುತ್ತಾರೆ. ಸಾಕ್ಷಿಯು ಗುರುತಿಸಿದ ಛಾಯ ಚಿತ್ರಗಳ ಪ್ರಿಂಟಗಳನ್ನು ನಿಪಿ.4 ಮತ್ತು 5 ಎಂದು ಗುರುತಿಸಲಾಯಿತು. ಸದರಿ ಪಂಚನಾಮೆಗೆ ನಾನು ಮತ್ತು ಚಾಸಾ.3 ರವರು ಸಹಿ ಮಾಡಿರುತ್ತೇವೆ. ಪೊಲೀಸರಿಗೆ ನಾನು ಈ ಎಲ್ಲಾ ವಿಚಾರವಾಗಿ ಹೇಳಿಕೆ ನೀಡಿರುತ್ತೇನೆ.

**ಪಾಟೀ ಸವಾಲುಃ ಆರೋಪಿ ಪರ ವಕೀಲರಿಂದಃ**

ಪಂಚನಾಮೆಗೆ ನಾನು ಮಾಹಿತಿ ನೀಡಿದ್ದೇನೆ. ಪೊಲೀಸರಿಗೆ ಘಟನಾ ಸ್ಥಳವನ್ನು ನಾನೇ ತೋರಿಸಿರುತ್ತೇನೆ. ಪೊಲೀಸರಿಗೆ ಗಲಾಟೆ ನೋಡಿದ್ದೇನೆ ಎಂದು ಹೇಳಿಕೆ ನೀಡಿದ್ದೇನೆ. ಗಲಾಟೆ ಮಧ್ಯಾಹ್ನ

2.45 ಗಂಟೆಗೆ ನಡೆದಿರುತ್ತದೆ. ಗಲಾಟೆಯಾದ ಸ್ಥಳದಲ್ಲಿ ಕೂದಲು ಅಥವಾ ರಕ್ತದ ಕಲೆ ಇದ್ದ ಬಗ್ಗೆ ನಾನು ಗಮನಿಸಿಲ್ಲ ಅದು ಪೊಲೀಸರಿಗೆ ಗೊತ್ತು. ಪೊಲೀಸರು ಪಂಚನಾಮೆ ಬರೆದಿರುತ್ತಾರೆ. ಯಾವುದರ ಸಹಾಯದಿಂದ ಬರೆದಿರುತ್ತಾರೆ ಎಂದು ನಾನು ಗಮನಿಸಿಲ್ಲ. ಪಂಚನಾಮೆಯಲ್ಲಿ ಬರೆದಿರುವ ಅಂಶಗಳನ್ನು ನೀವು ಓದಿಲ್ಲ ಎಂದರೆ ಸಾಕ್ಷಿಯು ನನಗೆ ಓದಲು ಬರುವುದಿಲ್ಲ ಎಂದು ನುಡಿಯುತ್ತಾರೆ. ನಾನು ಜಿಲ್ಲಾ ಪಂಚಾಯ್ತಿಯಲ್ಲಿ ಚುನಾವಣೆಗೆ ನಿಂತಿದ್ದೆನು. ಅದರಲ್ಲಿ ಸೋತಿರುತ್ತೇನೆ. ರಾಜಕೀಯ ದ್ವೇಷದಿಂದ ಆರೋಪಿ ವಿರುದ್ಧ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ನನ್ನ ಸಮಕ್ಷಮ ಯಾವುದೇ ಪಂಚನಾಮೆ ಜರುಗಿಸಿಲ್ಲ, ಕಚ್ಚಾ ನಕಾಶೆ ತೆಗೆದಿಲ್ಲ ಹಾಗೂ ಪೊಟೋ ತೆಗೆದಿಲ್ಲ ಎಂದರೆ ಸರಿಯಲ್ಲ. ಆರೋಪಿಯ ಮನೆ ಮುಖ್ಯ ಬಾಗಿಲು ಪೂರ್ವಕ್ಕೆ ಇದೆ. ಸದರಿಯವರ ಪೂರ್ವಾಭಿಮುಖವಾಗಿ ಇದೆ ಎಂದರೆ ನಾನು ಗಮನಿಸಿಲ್ಲ. ಚಾಸಾ.1 ರವರಿಗೆ ಅನುಕೂಲವಾಗಲಿ ಎಂದು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಮರುವಿಚಾರಣೆ ಇಲ್ಲ.**

(ಮುಕ್ತ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನದಂತೆ ಬೆರಳಚ್ಚುಪಡಿಸಲಾಯಿತು.)

ಓದಿ ಹೇಳಿ ಕೇಳಿ ಸರಿ ಇದೆ.

sd/

2 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು
ಮತ್ತು ಜೆಎಂಎಫ್‌ಸಿ, ಹರಿಹರ